**ಕರ್ನಾಟಕ ವಿಧಾನ ಸಭೆ**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **110**

ಸದಸ್ಯರ ಹೆಸರು : ಶ್ರೀ ಅಪ್ಪಾಜಿ ಸಿ.ಎಸ್. ನಾಡಗೌಡ

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 10-07-2023

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕೆ.ಎಸ್.ಆರ್.ಟಿ.ಸಿ ಹಾಗೂ ಬಿ.ಎಂ.ಟಿ.ಸಿ ನೌಕರರುಗಳನ್ನು ಸರ್ಕಾರಿ ನೌಕರರೆಂದು ಪರಿಗಣಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಅಂತಹ ಪ್ರಸ್ತಾವನೆ ಇರುವುದಿಲ್ಲ. |
| ಆ | ಹಾಗಿದ್ದಲ್ಲಿ, ಸರ್ಕಾರವು ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು) | |
| ಇ | ಈ ಸಾರಿಗೆ ನೌಕರರ ಸರಿಸಮಾನವಾದ ವೇತನ ಹಾಗೂ ಇತರೆ ಎಲ್ಲಾ ಸೌಲಭ್ಯಗಳನ್ನು ನೀಡಲು ಯಾವ ಕ್ರಮ ಕೈಗೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು) | ರಾಜ್ಯ ರಸ್ತೆ ಸಾರಿಗೆ ನಿಗಮಗಳು ರಸ್ತೆ ಸಾರಿಗೆ ನಿಗಮಗಳ ಕಾಯ್ದೆ-1950ರಡಿ ಅಸ್ತಿತ್ವಕ್ಕೆ ಬಂದಿರುವ ಸರ್ಕಾರಿ ಸ್ವಾಮ್ಯದ ಸ್ವಾಯತ್ತ ಸಂಸ್ಥೆ ಆಗಿರುತ್ತದೆ. ರಸ್ತೆ ಸಾರಿಗೆ ನಿಗಮಗಳ ನಿರ್ವಹಣೆ ಮತ್ತು ಸಿಬ್ಬಂದಿಗಳ ವೇತನ ಹಾಗೂ ಎಲ್ಲಾ ಆರ್ಥಿಕ ಸೌಲಭ್ಯಗಳನ್ನು ನಿಗಮಗಳು ಆಂತರಿಕ ಮೂಲಗಳಿಂದಲೇ ಭರಿಸಬೇಕಿದೆ. ಆದ್ದರಿಂದ, ರಾಜ್ಯ ಸರ್ಕಾರಿ ನೌಕರರ ವೇತನ ಶ್ರೇಣಿ ಮತ್ತು ವೇತನವನ್ನು ರಸ್ತೆ ಸಾರಿಗೆ ನಿಗಮಗಳ ನೌಕರರ ವೇತನ ಶ್ರೇಣಿ ಮತ್ತು ವೇತನಕ್ಕೆ ಹೋಲಿಸಲು ಬರುವುದಿಲ್ಲ.<br><br>ಸಾರಿಗೆ ಸಂಸ್ಥೆಗಳ ನೌಕರರು ದಿನಾಂಕ:31/12/2019 ರಂದು ಪಡೆಯುತ್ತಿದ್ದ ಮೂಲ ವೇತನವನ್ನು ಶೇ.15ರಷ್ಟು ಹೆಚ್ಚಿಸಿ ದಿನಾಂಕ: 01.03.2023ರಿಂದ ಜಾರಿಗೆ ಬರುವಂತೆ ವೇತನ ಪರಿಷ್ಕರಣೆ ಮಾಡಲಾಗಿದೆ.<br><br>ಅಲ್ಲದೇ, ಸಾರಿಗೆ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ವೇತನ ಬಡ್ತಿಗಳನ್ನು ಮತ್ತು ಇತರೆ ವೇತನ ಭತ್ಯೆಗಳಾದ ತುಟ್ಟಿ ಭತ್ಯೆ, ಮನೆ ಬಾಡಿಗೆ ಭತ್ಯೆ, ಪ್ರಭಾರ ಕಾರ್ಯ ಭತ್ಯೆ, ಅಧಿಕಾವಧಿ ಭತ್ಯೆ, ವಾಷಿಂಗ್ ಭತ್ಯೆ, ಬಾಟಾ, ಇನ್ಸೆಂಟಿವ್, ರಾತ್ರಿ ಭತ್ಯೆ, ಸಹ ವೇತನ ರಜೆ ಭತ್ಯೆ, ಪ್ರವಾಸ ಭತ್ಯೆ, ನಗರ ಪರಿಹಾರ ಭತ್ಯೆ, ಕನ್ವಿಯನಸ್ ಭತ್ಯೆ, ಶಿಶುಪಾಲನಾ ಭತ್ಯೆ, ಬೆಳ್ಳಿ & ಬಂಗಾರ ಪದಕ ಭತ್ಯೆ, ವಾಹನ ಭತ್ಯೆ, ದಿನ ಪತ್ರಿಕೆ ಭತ್ಯೆ, ಪರಿಚಾರಕ ಭತ್ಯೆ, ಹಾರ್ಡ್‌ಶಿಪ್ ಭತ್ಯೆ, ಮುಂತಾದವುಗಳನ್ನು ಪಾವತಿಸಲಾಗುತ್ತಿದೆ. ಅಲ್ಲದೇ, ಅರ್ಹ ಸಿಬ್ಬಂದಿಗಳಿಗೆ ಮುಂಬಡ್ತಿ, ಆಯ್ಕೆ ಶ್ರೇಣಿ, ಉನ್ನತ ಶ್ರೇಣಿ, ಗಳಿಕೆ ರಜೆ ನಗದಿಕರಣ, ವಿಶೇಷ ವೇತನ ಬಡ್ತಿ, ವಿಶೇಷ ರಜೆಗಳು ಹಾಗೂ ಇತರೆ ಸೌಲಭ್ಯಗಳನ್ನು ನಿಯಮಾನುಸಾರ ಕಾಲಕಾಲಕ್ಕೆ ನೀಡಲಾಗುತ್ತಿದೆ. |

ಸಂಖ್ಯೆ: ಟಿಡಿ 79 ಟಿಸಿಕ್ಯೂ 2023

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು